# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಕೂಡ್ಲಿಗಿ.

## ಸಿ ಸಿ - 47/2019

ದಿನಾಂಕಃ 30.06.2025 ರಂದು ಸಾಕ್ಷಿದಾರರಿಗೆ, ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

| | | |
|---|---|---|
| ಹೆಸರು | : | ಸುರೇಶ.ಡಿ |
| ತಂದೆಯ ಹೆಸರು | : | ಪಕ್ಕೀರ್ ನಾಯ್ಕ |
| ವಯಸ್ಸು | : | 43 ವರ್ಷ |
| ಉದ್ಯೋಗ | : | ಸಿ.ಪಿ.ಐ, ಕೊಪ್ಪಳ ಗ್ರಾಮೀಣ ವೃತ್ತ |
| ವಾಸಸ್ಥಳ | : | ಕೊಪ್ಪಳ |

## ಮುಖ್ಯ ವಿಚಾರಣೆ ಸ.ಸ.ಅ ರವರಿಂದಃ

ನಾನು ಜನೆವರಿ-2015 ರಿಂದ ಸೆಪ್ಟೆಂಬರ್-2017 ರವರೆಗೆ ಹೊಸಳ್ಳಿ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಎಂದು ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 25.08.2015 ರಂದು ಈ ಪ್ರಕರಣದ ಕಡತವನ್ನು ಚಾ.ಸಾ 14 ರವರಿಂದ ಪಡೆದುಕೊಂಡು ತನಿಖೆ ಮುಂದುವರೆಸಿರುತ್ತೇನೆ. ಅದೇ ದಿನ ಗಾಯಾಳುವಿನ ಗಾಯದ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ 6 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 6-ಎ ಎಂದು ಗುರುತಿಸಲಾಯಿತು. ದಿಃ 15.10.2015 ರಂದು ಕ್ರೇನ್ ನಂಃ ಕೆಎ-52/ಎಂ-1734 ನೇದ್ದನ್ನು ಅದರ ಜಿ.ಪಿ.ಎ ಹೋಲ್ಡರ್ ಧರ್ಮೇಂದ್ರಸಿಂಗ್ ರವರ ವಶಕ್ಕೆ ಬಾಂಡ್ ಪಡೆದುಕೊಂಡು ಅವರ ಹೇಳಿಕೆಯನ್ನು ಪಡೆದಿರುತ್ತೇನೆ. ಸದರಿ ಇಂಡಮ್ನಿಟಿ ಬಾಂಡ್ ಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ 7 ಎಂದು, ಅದರಲ್ಲಿರುವ ನನ್ನ ಸಹಿಯನ್ನು ನಿ.ಪಿ 7-ಎ ಎಂದು ಗುರುತಿಸಲಾಯಿತು. ದಿಃ 16.10.2015 ರಂದು ಈ ಪ್ರಕರಣದ ತನಿಖೆ ಪೂರ್ಣಗೊಂಡಿದ್ದರಿಂದ ಆರೋಪಿಯ ವಿರುದ್ಧ ದೋಷಾರೋಪಣೆ ಪತ್ರ ಸಲ್ಲಿಸಿರುತ್ತೇನೆ.

## ಪಾಟೀ ಸವಾಲು ಆರೋಪಿ ಪರ ವಕೀಲರಿಂದಃ

ಆರೋಪಿ ಯಾವುದೇ ತಪ್ಪನ್ನು ಮಾಡದೆ ಇದ್ದರು ಆರೋಪಿ ವಿರುದ್ಧ ಸುಳ್ಳು ಪ್ರಕರಣವನ್ನು ದಾಖಲಿಸಿ ದೋಷರೋಪಣೆ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆಯನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದ ಗಾಯಾಳುವಿಗೆ

ಸಹಾಯ ಮಾಡುವ ಸಲುವಾಗಿ ಆರೋಪಿ ವಿರುದ್ಧ ಸುಳ್ಳು ದೋಷಾರೋಪಣೆ ಪತ್ರ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ  ನನ್ನ  ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

**ಓ,ಹೇ,ಕೇ,ಸರಿ ಇದೆ,**

**ಹಿ.ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ಕೂಡ್ಲಿಗಿ.**